**ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿ, 6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು.**

ಸಂಖ್ಯೆ:ಎ8/ಎಸ್.ಎಸ್.ಎಲ್.ಸಿ.ಅಧಿಸೂಚನೆ/ಮಾರ್ಚ್–24/24/2023–24 ದಿನಾಂಕ: 06.11.2023

**:: ಸುತ್ತೋಲೆ ::**

ವಿಷಯ:– 2024ನೇ ಮಾರ್ಚ್ ಮಾಹೆಯಲ್ಲಿ ನಡೆಯಲಿರುವ ಎಸ್.ಎಸ್.ಎಲ್.ಸಿ ಪರೀಕ್ಷೆ–1ಕ್ಕೆ ರಾಜ್ಯದ ಶಾಲಾ/ ಕಾಲೇಜುಗಳಿಂದ ಹಾಜರಾಗುವ ವಿದ್ಯಾರ್ಥಿಗಳನ್ನು ನೋಂದಾಯಿಸಲು ದಿನಾಂಕ ವಿಸ್ತರಣೆ ಕುರಿತು.

ಉಲ್ಲೇಖ:– 1. ಮಂಡಳಿ ಅಧಿಸೂಚನೆ ಸಂಖ್ಯೆ: ಎ8/ಎಸ್.ಎಸ್.ಎಲ್.ಸಿ.ಅಧಿಸೂಚನೆ/ಮಾರ್ಚ್–24/24/2023–24 ದಿನಾಂಕ: 04.10.2023.

2. ಈ ಕಛೇರಿ ಸುತ್ತೋಲೆ ಸಂಖ್ಯೆ:ಸಿಎಸ್1/ಎಸ್ಎಸ್ಎಲ್ಸಿ/ಮಾರ್ಚ್–2024/01 /2023–24 ದಿನಾಂಕ:10.10.2023.

* * * * *

2024ನೇ ಮಾರ್ಚ್ ಮಾಹೆಯಲ್ಲಿ ನಡೆಯುವ ಎಸ್.ಎಸ್.ಎಲ್.ಸಿ ಪರೀಕ್ಷೆ–1ಕ್ಕೆ ರಾಜ್ಯದ ಸರ್ಕಾರಿ ಮತ್ತು ಸರ್ಕಾರದಿಂದ ಮಾನ್ಯತೆ ಪಡೆದ ಅನುದಾನಿತ, ಅನುದಾನರಹಿತ ಶಾಲೆಗಳಿಂದ ಹಾಜರಾಗುವ ಅರ್ಹ ಶಾಲಾ ವಿದ್ಯಾರ್ಥಿಗಳು, ಖಾಸಗಿ ಅಭ್ಯರ್ಥಿಗಳು ಮತ್ತು ಪುನರಾವರ್ತಿತ ಅಭ್ಯರ್ಥಿಗಳ ಮಾಹಿತಿಯನ್ನು ಆನ್‌ಲೈನ್ ಮುಖಾಂತರ ನೋಂದಾಯಿಸಲು ದಿನಾಂಕವನ್ನು ನಿಗಧಿಪಡಿಸಿ ಉಲ್ಲೇಖಿತ–2ರಲ್ಲಿ ಸುತ್ತೋಲೆಯನ್ನು ಹೊರಡಿಸಲಾಗಿರುತ್ತದೆ.

ಆದರೆ, ರಾಜ್ಯದ ಕೆಲವು ಶಾಲೆಗಳಿಂದ ಹಾಗೂ ಪೋಷಕರಿಂದ ಮಂಡಳಿಗೆ ದೂರವಾಣಿಯ ಮುಖಾಂತರ ವಿದ್ಯಾರ್ಥಿಗಳ ನೋಂದಣಿ ಮಾಡಲು ದಿನಾಂಕವನ್ನು ವಿಸ್ತರಿಸಲು ಕೋರಿಕೆಗಳು ಬಂದ ಹಿನ್ನೆಲೆಯಲ್ಲಿ, ವಿದ್ಯಾರ್ಥಿಗಳ ನೋಂದಣಿಗಾಗಿ ದಿನಾಂಕಗಳನ್ನು ಈ ಕೆಳಕಂಡಂತೆ ವಿಸ್ತರಿಸಲಾಗಿದೆ.

| ಕ್ರ ಸಂ | ವಿವರ | ಈಗಾಗಲೇ ನಿಗಧಿಪಡಿಸಿದ್ದ ದಿನಾಂಕ | ವಿಸ್ತರಣೆ ಮಾಡಿದ ಕೊನೆಯ ದಿನಾಂಕ |
|---|---|---|---|
| 1 | ಮಂಡಳಿ ಜಾಲತಾಣದ ಶಾಲಾಲಾಗಿನ್ ಮೂಲಕ CCERF, CCEPF CCERR , CCEPR, NSR ಮತ್ತು NSPR ವಿದ್ಯಾರ್ಥಿಗಳ ಮಾಹಿತಿಯನ್ನು ಅಪ್‌ಲೋಡ್ ಮಾಡಲು ನಿಗದಿಪಡಿಸಿದ **ಅಂತಿಮ** ದಿನಾಂಕ: | 04.11.2023 | 15.11.2023 |

ಮೇಲೆ ವಿವರಿಸಿರುವಂತೆ ವಿಸ್ತರಿಸಿರುವ ದಿನಾಂಕದವರೆಗೆ ವಿದ್ಯಾರ್ಥಿಗಳ ನೋಂದಣಿ ಮಾಡತಕ್ಕದ್ದು. ಈ ಕುರಿತು ತಮ್ಮ ವ್ಯಾಪ್ತಿಯಲ್ಲಿ ಬರುವ ಶಾಲಾ ಮುಖ್ಯೋಪಾಧ್ಯಾಯರ ಮುಖಾಂತರ ವಿದ್ಯಾರ್ಥಿಗಳ/ಪೋಷಕರ ಗಮನಕ್ಕೆ ತಂದು ಇದರ ಸದುಪಯೋಗವನ್ನು ಪಡೆದುಕೊಳ್ಳಲು ಸಂಬಂಧಿಸಿದ ಜಿಲ್ಲಾ ಉಪನಿರ್ದೇಶಕರು / ಕ್ಷೇತ್ರ ಶಿಕ್ಷಣಾಧಿಕಾರಿಗಳು ಅಗತ್ಯ ಕ್ರಮ ಕೈಗೊಳ್ಳಬೇಕೆಂದು ಈ ಮೂಲಕ ತಿಳಿಸಿದೆ.

**ವಿಶೇಷ ಸೂಚನೆ:– ದಿನಾಂಕ:27.11.2023ರವರೆಗೆ ಹೊಸದಾಗಿ ಶಾಲಾ ಸಂಕೇತ ಪಡೆಯಲು ಅವದಿಯನ್ನು ನಿಗಧಿಪಡಿಸಲಾಗಿದೆ. ಇಂತಹ ಪ್ರಕರಣಗಳಿಗೆ ಮಾತ್ರ ಪರೀಕ್ಷಾ ನೋಂದಣಿಗೆ ದಿನಾಂಕ:27.11.2023ರವರೆಗೆ ಅವಕಾಶವಿರುತ್ತದೆ. ಉಳಿದ ವಿದ್ಯಾರ್ಥಿಗಳ ನೋಂದಣಿಯನ್ನು ದಿನಾಂಕ:15.11.2023ರೊಳಗೆ ಪೂರ್ಣಗೊಳಿಸತಕ್ಕದ್ದು. ನಿಗಧಿಪಡಿಸಿದ ಅವಧಿಯ ನಂತರ ನೋಂದಣಿಗೆ ಅವಕಾಶವಿರುವುದಿಲ್ಲ. ಯಾವುದೇ ವಿದ್ಯಾರ್ಥಿಯು ಪರೀಕ್ಷಾ ನೋಂದಣಿಯಿಂದ ಬಿಟ್ಟುಹೋದಲ್ಲಿ ಸಂಬಂಧಿಸಿದ ಶಾಲಾ ಮುಖ್ಯೋಪಾಧ್ಯಾಯರೇ ನೇರ ಹೊಣೆಗಾರರಾಗುತ್ತಾರೆ.**

6/11/2023

(ಹೆಚ್.ಎನ್.ಗೋಪಾಲಕೃಷ್ಣ)
ನಿರ್ದೇಶಕರು (ಪರೀಕ್ಷೆಗಳು)

**ಗೆ**

1. ರಾಜ್ಯದ ಎಲ್ಲಾ ಜಿಲ್ಲಾ ಉಪ ನಿರ್ದೇಶಕರು (ಆಡಳಿತ), ಸಾ ಶಿ ಇ ರವರು ಕೂಡಲೇ ಕ್ರಮವಹಿಸಲು ತಿಳಿಸಿದೆ.
2. ರಾಜ್ಯದ ಎಲ್ಲಾ ಕ್ಷೇತ್ರಶಿಕ್ಷಣಾಧಿಕಾರಿಗಳಿಗೆ ಸೂಕ್ತ ಕ್ರಮಕ್ಕಾಗಿ.

A8_letter1